# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ ಎ<br>Part – IVA | ಬೆಂಗಳೂರು, ಮಂಗಳವಾರ, ೩೦, ಜನವರಿ, ೨೦೨೪(ಮಾಘ, ೧೦, ಶಕವರ್ಷ, ೧೯೪೫)<br>BENGALURU, TUESDAY, 30, JANUARY, 2024(MAGHA, 10, SHAKAVARSHA, 1945) | ನಂ. ೪೩<br>No. 43 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 26 ಶಾಸನ 2023, ದಿನಾಂಕ: 30.01.2024**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023 ಇದಕ್ಕೆ 2024ರ ಜನವರಿ ತಿಂಗಳ 29 ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2024 ರ ಕರ್ನಾಟಕ ಅಧಿನಿಯಮ ಸಂಖ್ಯೆ: 01 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IVA) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## 2024ರ ಕರ್ನಾಟಕ ಅಧಿನಿಯಮ ಸಂಖ್ಯೆ: 01

(2024ರ ಜನವರಿ ತಿಂಗಳ 30ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2023

(2024ರ ಜನವರಿ ತಿಂಗಳ 29 ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾನ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ಸೆಪ್ಟಂಬರ್ 16ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 160ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ 14) 160ನೇ ಪ್ರಕರಣದಲ್ಲಿನ ಮೊದಲನೇ ಪರಂತುಕದಲ್ಲಿರುವ "ಚಿಕ್ಕಮಗಳೂರು" ಎಂಬ ಪದದ ಮೊದಲು "ಶಿವಮೊಗ್ಗ(ಭದ್ರಾವತಿ, ಶಿವಮೊಗ್ಗ ಮತ್ತು ಶಿಕಾರಿಪುರ ತಾಲ್ಲೂಕುಗಳನ್ನು ಹೊರತುಪಡಿಸಿ)" ಎಂಬ ಪದಗಳು, ಆವರಣ ಚಿಹ್ನೆಗಳು ಹಾಗೂ ಉದ್ಧರಣ ಚಿಹ್ನೆಗಳನ್ನು ಸೇರಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 03)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

## PARLIAMENTARY AFFAIRS AND LEGISLATION SECRETARIAT NOTIFICATION

**NO. DPAL 26 SHASANA 2023, BENGALURU, DATED:30.01.2024**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2023 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ:01) ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.-

## KARNATAKA ACT NO. 01 OF 2024

(First Published in the Karnataka Gazette Extra-ordinary on the 30 th day of January 2024)

### THE KARNATAKA GRAM SWARAJ AND PANCHAYAT RAJ (AMENDMENT) ACT, 2023

(Received the assent of the Governor on the 29th day of January 2024)

An Act further to amend the Karnataka Gram Swaraj and Panchayat Raj Act, 1993 (Karnataka Act 14 of 1993).

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



Whereas, it is expedient further to amend the Karnataka Gram Swaraj and Panchayat Raj Act, 1993 (Karnataka Act 14 of 1993) for the purposes hereinafter appearing;

Be it enacted by the Karnataka State Legislature in the seventy fourth year of the Republic of India, as follows:-

**1. Short title and commencement.-** (1) This Act may be called the Karnataka Gram Swaraj and Panchayat Raj (Amendment) Act, 2023.

(2) It shall be deemed to have come into force with effect from 16th day of September, 2023.

**2. Amendment of section 160.-** In the Karnataka Gram Swaraj and Panchayat Raj Act, 1993 (Karnataka Act 14 of 1993) in section 160, in the first proviso, before the word "Chikkamagalur" the words, brackets and punctuation "Shivamogga (excluding Bhadravati, Shivamogga and Shikaripura Taluks)," shall be inserted.

**3. Repeal and savings.-** (1) The Karnataka Gram Swaraj and Panchayat Raj (Amendment) Ordinance, 2023 (Karnataka Ordinance 03 of 2023) is hereby repealed.

(2) Notwithstanding such repeal, anything done or any action taken under the Principal Act, as amended by the said Ordinance, shall be deemed to have been done or taken under the Principal Act, as amended by this Act.

The above translation of ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2023 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ:01) be published in the official Gazette under clause (3) of Article 348 of the constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
the Governor of Karnataka,

**G. SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH
Digitally signed by THAMMAIAH
Date: 2024.01.30 17:16:59 +05'30'